ಕರ್ನಾಟಕ ಸರ್ಕಾರ

# ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ,

ಆನಂದರಾವ್ ವೃತ್ತ, ಬೆಂಗಳೂರು-560 009.

ಸಂಖ್ಯೆ: ಸಿಜಿಎ(2)ಇತರೆ01/2019-20 ದಿನಾಂಕ: 17/06/2020

## ಸುತ್ತೋಲೆ

ವಿಷಯ: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವಾಗಲೇ ಮರಣ ಹೊಂದಿದ ನೌಕರರ ಅವಲಂಬಿತರಿಗೆ ಅನುಕಂಪ ಆಧಾರದ ಮೇಲೆ ನೇಮಕಾತಿ ನೀಡುವ ಕುರಿತು.

ಉಲ್ಲೇಖ:
1. ಸರ್ಕಾರದ ಅರೆಸರ್ಕಾರಿಪತ್ರ ಸಂಖ್ಯೆ ಆಕುಕ 85 ಸಿ&ಆರ್ 2019 ದಿನಾಂಕ:30-05-2020
2. ಕರ್ನಾಟಕ ನಾಗರಿಕ ಸೇವಾ (ಅನುಕಂಪದ ಆಧಾರದ ನೇಮಕಾತಿ) ನಿಯಮಗಳು 1996 (ಕಾಲಕಾಲಕ್ಕೆ ತಿದ್ದುಪಡಿಯಾದಂತೆ)

********

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವಾಗಲೇ ಮರಣ ಹೊಂದಿದ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡುವ ಸಂಬಂಧ ನಿರ್ದೇಶನಾಲಕ್ಕೆ ಅಪೂರ್ಣ ಪ್ರಸ್ತಾವನೆಗಳನ್ನು ಸಲ್ಲಿಸುತ್ತಿದ್ದು. ಇದರಿಂದ ನಿರ್ದೇಶನಾಲಯದ ಹಂತದಲ್ಲಿ ಹಲವಾರು ಪ್ರಕರಣಗಳು ಅನಾವಶ್ಯಕ ಬಾಕಿ ಉಳಿಯಲು ಕಾರಣವಾಗುತ್ತಿದೆ. ಉಲ್ಲೇಖ(1)ರ ಸರ್ಕಾರದ ಅರೆಸರ್ಕಾರಿಪತ್ರದಲ್ಲಿ ಅನುಕಂಪದ ಆಧಾರದ ನೇಮಕಾತಿಯ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಬೇಕೆಂದು ಹಾಗೂ ಕೈಗೊಂಡ ಕ್ರಮದ ಬಗ್ಗೆ ಕಾಲಕಾಲಕ್ಕೆ ಮಾಹಿತಿಯನ್ನು ಸರ್ಕಾರಕ್ಕೆ ಸಲ್ಲಿಸಲು ಸೂಚಿಸಿರುತ್ತಾರೆ.

ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಮಾನ್ಯ ಆಯುಕ್ತರು ಈ ಕುರಿತು ಕೂಡಲೇ ಕ್ರಮ ಕೈಗೊಂಡು ಪ್ರಕರಣಗಳನ್ನು ಇತ್ಯರ್ಥಗೊಳಿಸಲು ಸೂಚಿಸಿರುತ್ತಾರೆ.

ಆದುದುರಿಂದ. ಇನ್ನು ಮುಂದೆ ಅನುಕಂಪದ ಆಧಾರದ ನೇಮಕಾತಿಗೆ ಪ್ರಸ್ತಾವನೆಯನ್ನು ಸಲ್ಲಿಸುವಾಗ ಮೃತ ನೌಕರರು ಕಾರ್ಯ ನಿರ್ವಹಿಸುತ್ತಿದ್ದ ಕಛೇರಿ ಮುಖ್ಯಸ್ಥರು ಕರ್ನಾಟಕ ನಾಗರಿಕ ಸೇವಾ (ಅನುಕಂಪದ ಆಧಾರದ ನೇಮಕಾತಿ) ನಿಯಮಗಳು 1996 (ಕಾಲಕಾಲಕ್ಕೆ ತಿದ್ದುಪಡಿಯಾದಂತೆ)ಗಳ ಅಡಿಯಲ್ಲಿ ಕೂಲಂಕುಶವಾಗಿ ಪರಿಶೀಲಿಸಿ ಎಲ್ಲಾ ಅವಶ್ಯಕ ಮೂಲ/ಛಾಯಾಪ್ರತಿಗಳಲ್ಲ ದಾಖಲೆಗಳೊಂದಿಗೆ ಪ್ರಸ್ತಾವನೆಯನ್ನು ಸಂಬಂಧಪಟ್ಟ ನಿಯಂತ್ರಣಾಧಿಕಾರಿಗಳಿಗೆ ಸಲ್ಲಿಸುವುದು.

ಕಛೇರಿ ಮುಖ್ಯಸ್ಥರಿಂದ ಸ್ವೀಕೃತವಾದ ಪ್ರಸ್ತಾವನೆಯನ್ನು ಈ ಪತ್ರದೊಂದಿಗೆ ಲಗತ್ತಿಸಿರುವ ಚೆಕ್‌ಲಿಸ್ಟ್‌ನೊಂದಿಗೆ ದಾಖಲೆ/ಮಾಹಿತಿಗಳನ್ನು ಸಂಬಂಧಿಸಿದ ನಿಯಂತ್ರಣಾಧಿಕಾರಿಗಳು ಖುದ್ದು ಪರಿಶೀಲಿಸಿ, ದೃಢೀಕರಿಸಿ ಪೂರ್ಣಪ್ರಮಾಣದ ಪ್ರಸ್ತಾವನೆಯನ್ನು ಮಾತ್ರ ನಿರ್ದೇಶನಾಯಲಕ್ಕೆ ಸಲ್ಲಿಸಲು ಸೂಚಿಸಿದೆ.

**ಒಂದುವೇಳೆ ಪುನ: ಅಪೂರ್ಣ ಪ್ರಸ್ತಾವನೆಗಳನ್ನು ಸಲ್ಲಿಸಿದ್ದಲ್ಲಿ, ಸಂಬಂಧಿಸಿದ ನಿಯಂತ್ರಣಾಧಿಕಾರಿಗಳನ್ನು ಜವಾಬ್ದಾರರನ್ನಾಗಿ ಮಾಡಿ ಅವರುಗಳ ವಿರುದ್ಧ ಸಕ್ಷಮ ಪ್ರಾಧಿಕಾರದಿಂದ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು ಎಂದು ಸೂಚಿಸಲಾಗಿದೆ.**

ಮುಖ್ಯ ಆಡಳಿತಾಧಿಕಾರಿಗಳು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು,
ಬೆಂಗಳೂರು.

-2-

Scanned by CamScanner

ಮಾಹಿತಿಗಾಗಿ:

1. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ ಬೆಂಗಳೂರು.
2. ಮಾನ್ಯ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು
3. ಮಾನ್ಯ ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು

ಮಾಹಿತಿಗಾಗು ಮತ್ತು ಸೂಕ್ತ ಕ್ರಮಕ್ಕಾಗಿ:

1. ಎಲ್ಲಾ ಜಿಲ್ಲಾ ಆರೋಗ್ಯ ಮತು ಕುಟುಂಬ ಕಲ್ಯಾಣಾಧಿಕಾರಿಗಳು
2. ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರು
3. ನಿರ್ದೇಶಕರು/ಡೀನ್/ವೈದ್ಯಕೀಯ ಅಧೀಕ್ಷಕರು.
4. ಮುಖ್ಯಸ್ಥರು, ಆರೋಗ್ಯ ಮತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಎಲ್ಲಾ ಸ್ವಾಯತ್ತ ಸಂಸ್ಥೆಗಳು
5. ಆಡಳತ ವೈದ್ಯಾಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಳ ಕಛೇರಿ ಮತ್ತು ತಾಲ್ಲೂಕು/ಸಮುದಾಯ/ಪ್ರಾಥಮಿಕ ಆರೋಗ್ಯ ಕೇಂದ್ರಗಳು.
6. ಕಛೇರಿ ಪ್ರತಿ.

Scanned by CamScanner